# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 725

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 22.09.2022

ಉತ್ತರಿಸುವ ಸಚಿವರು : ಮುಖ್ಯಮಂತ್ರಿ.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಅರ್ಹ ಫಲಾನುಭವಿಗಳಿಗೆ ವಿತರಣೆಯಾಗಬೇಕಾಗಿದ್ದ ಪಡಿತರ ಅಕ್ರಮವಾಗಿ ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಆ | ಬಂದಿದ್ದಲ್ಲಿ, ರಾಜ್ಯದಲ್ಲಿ ಇದುವರೆಗೆ ಈ ರೀತಿಯ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ; | ದಿನಾಂಕ: 01.04.2021 ರಿಂದ 31.08.2022 ರವರೆಗೆ ಒಟ್ಟು 297 ಪ್ರಕರಣಗಳು ದಾಖಲಾಗಿರುತ್ತವೆ. |
| ಇ | ಸದರಿ ಪ್ರಕರಣಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಸರ್ಕಾರ ಇದುವರೆಗೆ ಕೈಗೊಂಡ ಕ್ರಮಗಳೇನು; | ಆರೋಪಿತರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪ್ರಕರಣ ದಾಖಲಿಸಿ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತಿದೆ ಹಾಗೂ ಪ್ರಕರಣದಲ್ಲಿ ವಶಪಡಿಸಿಕೊಂಡ ಅಗತ್ಯ ವಸ್ತುಗಳನ್ನು ಜಪ್ತಿ ಮಾಡಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುತ್ತಿದೆ. |
| ಈ | ಪಡಿತರ ಅಕ್ರಮವಾಗಿ ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರ ರೂಪಿಸಿರುವ ಕಠಿಣ ಕ್ರಮಗಳೇನು? | ಅಕ್ರಮ ದಾಸ್ತಾನು ಮತ್ತು ಕಾಳಸಂತೆ ವಹಿವಾಟುಗಳು ನಡೆಯುವುದನ್ನು ತಡೆಗಟ್ಟಿ ನಿರ್ದಿಷ್ಟ ಫಲಾನುಭವಿಗಳಿಗೆ ಪಡಿತರ ಆಹಾರ ಧಾನ್ಯಗಳು ತಲುಪುವುದನ್ನು ಖಾತರಿ ಪಡಿಸಿಕೊಳ್ಳಲು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅಗತ್ಯ ವಸ್ತುಗಳ ಕಾಯ್ದೆ 1955 ಮತ್ತು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013 ರ ಅಡಿಯಲ್ಲಿ ಹೊರಡಿಸಿರುವ ಆದೇಶಗಳಡಿಯಲ್ಲಿ ಜಾಗೃತಿ ಸಮಿತಿಗಳನ್ನು ರಚಿಸಲಾಗಿದೆ. ಅಕ್ರಮ ತಡೆಯಲು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಜೊತೆಗೆ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯಲ್ಲಿ ಇಲಾಖೆ ಅಧಿಕಾರಿಗಳನ್ನೊಳಗೊಂಡ "ರಾಜ್ಯ ಮಟ್ಟದ ಆಹಾರ ಜಾಗೃತಿ ಮತ್ತು ತನಿಖಾ ದಳ " ವನ್ನು ರಚಿಸಲಾಗಿದೆ. ಇದರೊಂದಿಗೆ ಅಗತ್ಯ ವಸ್ತುಗಳ ಕಾಯ್ದೆ 1955 ಮತ್ತು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013 ರ ಅಡಿಯಲ್ಲಿ ಜಾಗೃತಿ ಸಮಿತಿಗಳನ್ನು ರಚಿಸಲಾಗಿದೆ. ಅಕ್ರಮ ತಡೆಯಲು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಜೊತೆಗೆ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯಲ್ಲಿ ಇಲಾಖೆ ಅಧಿಕಾರಿಗಳನ್ನೊಳಗೊಂಡ "ರಾಜ್ಯ ಮಟ್ಟದ ಆಹಾರ ಜಾಗೃತಿ ಮತ್ತು ತನಿಖಾ ದಳ " ವನ್ನು ರಚಿಸಲಾಗಿದೆ. |

ಆನಾಸ 154 ಆರ್‌ಪಿಆರ್ 2022 (ಇ-ಆಫೀಸ್)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ